# ಮಾಜಿ ಸ್ಪೀಕರ್ ವಿರುದ್ಧ ಸಿಬಿಐ ತನಿಖೆಗೆ ಆಗ್ರಹ

ಸಂ.ಕ. ಸಮಾಚಾರ ಬೆಂಗಳೂರು: ಮಾಜಿ ಸ್ಪೀಕರ್ ರಮೇಶ್ ಕುಮಾರ್ ಅವರು ಔಷಧಿ ಖರೀದಿ ಅವ್ಯವಹಾರ, ಅರಣ್ಯ ಭೂಮಿ ಕಬಳಿಕೆ, ಸರ್ಕಾರಿ ಯುನಾನಿ ವೈದ್ಯಕೀಯ ವಿದ್ಯಾಲಯಕ್ಕೆ ಅಕ್ರಮವಾಗಿ ಹೊರಗಿನವರಿಗೆ ಪ್ರವೇಶ ನೀಡಿರುವುದು ಹಾಗೂ ಕೊಲೆ ಪ್ರಕರಣಗಳಲ್ಲಿ ಭಾಗಿಯಾಗಿದ್ದು ಈ ಎಲ್ಲ ಪ್ರಕರಣಗಳನ್ನು ಸಿಬಿಐ ತನಿಖೆಗೆ ಒಪ್ಪಿಸಬೇಕು ಎಂದು ಮಾಜಿ ಶಾಸಕ ಹಾಗೂ ಜೆಡಿಎಸ್ ಮುಖಂಡ ಜಿ.ಕೆ. ವೆಂಕಟಾಶಿವಾರೆಡ್ಡಿ ಆಗ್ರಹಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ನೇತೃತ್ವದ ಸರ್ಕಾರದಲ್ಲಿ ರಮೇಶ್ ಕುಮಾರ್ ಆರೋಗ್ಯ ಸಚಿವರಾಗಿದ್ದ ಸಂದರ್ಭದಲ್ಲಿ ಔಷಧಿಗಳ ಖರೀದಿ, ಅಂಬುಲೆನ್ಸ್‌ಗಳ ಖರೀದಿಯಲ್ಲಿ 535.22 ಕೋಟಿ ರೂ. ಗಳ ಅವ್ಯವಹಾರ ನಡೆದಿದೆ. ಬಡವರಿಗಾಗಿ ಮೀಸಲಿಟ್ಟ ದುರುಪಯೋಗವಾಗಿದೆ. ಈ ಬಗ್ಗೆ ಸಿಎಜಿ ವರದಿಯಲ್ಲೇ ತಿಳಿಸಲಾಗಿದೆ. ಈ ವಿಷಯ ವಿಧಾನಮಂಡಲದ ಸಾರ್ವಜನಿಕ ಲೆಕ್ಕಪತ್ರ ಸಮಿತಿ ಪರಿಶೀಲನೆ ಮಾಡಬೇಕಾಗಿತ್ತು. ಆದರೆ, ಇದುವರೆಗೆ ಈ ಕಾರ್ಯವಾಗಿಲ್ಲ. ಸಿಎಜಿ ವರದಿ ಹಾಗೂ ಅದರಲ್ಲಿನ ಆರೋಪಗಳನ್ನು ಮುಚ್ಚಿಹಾಕುವ ಕಾರ್ಯ ಮಾಡಲಾಗಿದೆ ಎಂದು ಆರೋಪ ಮಾಡಿದರು.

ರಾಜ್ಯದಲ್ಲಿನ ಸರ್ಕಾರಿ ಯುನಾನಿ ವೈದ್ಯಕೀಯ ವಿದ್ಯಾಲಯಕ್ಕೆ ಹೊರ ರಾಜ್ಯದ ವಿದ್ಯಾರ್ಥಿಗಳಿಗೆ ಅಕ್ರಮವಾಗಿ ವೈದ್ಯಕೀಯ ಕೋರ್ಸ್‌ಗಳಿಗೆ ಹೊರಗಿನ ರಾಜ್ಯದವರಿಗೆ ಅಕ್ರಮವಾಗಿ ಪ್ರವೇಶಾವಕಾಶ ನೀಡಿದ್ದಾರೆ. ಈ ಪ್ರಕರಣ ವಿಧಾನಮಂಡಲದಲ್ಲಿ ದೊಡ್ಡ ಸದ್ದು ಮಾಡಿತ್ತು. ಈ ಪ್ರಕರಣವನ್ನು ಸರ್ಕಾರ ಸಿಓಡಿ ತನಿಖೆಗೆ ವಹಿಸಿತ್ತು. ಆದರೆ, ರಮೇಶ್ ಕುಮಾರ್ ಅವರು ಅಧಿಕಾರಿಗಳ ಜೊತೆ ಶಾಮೀಲಾಗಿ ತನಿಖೆಯನ್ನೇ ರದ್ದುಪಡಿಸಿರುತ್ತಾರೆ ಎಂದು ದೂರಿದರು.

ರಮೇಶ್ ಕುಮಾರ್ ಹಲವಾರು ಕೊಲೆ ಪ್ರಕರಣಗಳಲ್ಲಿ ಆರೋಪಿತರಾಗಿದ್ದಾರೆ. ಶ್ರೀನಿವಾಸಪುರ ತಾಲೂಕಿನಲ್ಲಿನ 9 ಕೊಲೆ ಪ್ರಕರಣಗಳಲ್ಲಿ ಭಾಗಿಯಾಗಿದ್ದಾರೆ. ಆದರೆ, ತಮ್ಮ ಅಧಿಕಾರವನ್ನು ದುರುಪಯೋಗ ಮಾಡಿಕೊಂಡು ತಮ್ಮ ಮೇಲಿರುವ ಎಫ್ ಐಆರ್‌ಗಳನ್ನು ತೆರವು ಮಾಡುವಂತೆ ಮಾಡಿ ಅಮಾಯಕರು ಸಿಕ್ಕಿಹಾಕಿಕೊಳ್ಳುವಂತೆ ಮಾಡಿದ್ದಾರೆ ಎಂದು ಗಂಭೀರ ಆರೋಪ ಮಾಡಿ ರಮೇಶ್ ಕುಮಾರ್ ಮೇಲಿರುವ ಎಲ್ಲ ಪ್ರಕರಣಗಳ ಕುರಿತು ಸಿಬಿಐ ತನಿಖೆ ಮಾಡಿಸಬೇಕು ಎಂದು ರಾಜ್ಯ ಸರ್ಕಾರಕ್ಕೆ ಮನವಿ ಮಾಡಿಕೊಳ್ಳುತ್ತೇನೆ ಎಂದರು.